# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103, ☎ : 0816-2255650,2273511ಫ್ಯಾಕ್ಸ್ : 0816-2270719


ಸಂಖ್ಯೆ:ತುವಿ:ಪ.ವಿ.:2021-22: / 23 ದಿನಾಂಕ: 12.04.2021

## ಪ್ರಕಟಣೆಯ ಕೃಪೆಗಾಗಿ

ಕೆ.ಎಸ್.ಆರ್.ಟಿ.ಸಿ. ನೌಕರರ ಮುಷ್ಕರದಿಂದಾಗಿ ವಿದ್ಯಾರ್ಥಿಗಳ ಹಿತದೃಷ್ಠಿಯಿಂದ ತುಮಕೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕ ಪದವಿಗಳ 5 ದಿನಗಳ ಪರೀಕ್ಷೆಗಳನ್ನು ಮತ್ತು ಸ್ನಾತಕೋತ್ತರ ಪದವಿಗಳ 4 ದಿನಗಳ ಪರೀಕ್ಷೆಗಳನ್ನು ಮುಂದೂಡಿ ದಿನಾಂಕ: 08.04.2021 ರಂದು ಆದೇಶ ಹೊರಡಿಸಲಾಗಿತ್ತು. ಮುಂದೂಡಲ್ಪಟ್ಟ ಪರೀಕ್ಷೆಗಳು ಹಾಗೂ ಇತರೆ ಪರೀಕ್ಷೆಗಳು ದಿನಾಂಕ: 15.04.2021 ರಿಂದ ನಿಗಧಿತ ವೇಳಾಪಟ್ಟಿಯಂತೆಯೇ ನಡೆಯುತ್ತವೆ.

ಈಗಾಗಲೇ ಅನೇಕ ಪರೀಕ್ಷೆಗಳು ಮುಂದೂಡಲ್ಪಟ್ಟಿರುವುದರಿಂದ ವಿದ್ಯಾರ್ಥಿಗಳ ಮುಂದಿನ ಶೈಕ್ಷಣಿಕ ಪ್ರಗತಿಗೆ ಹಿನ್ನಡೆಯುಂಟಾಗುತ್ತದೆ. ಸಾರಿಗೆ ನೌಕರರ ಮುಷ್ಕರದ ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಲಭ್ಯವಿರುವ ಖಾಸಗಿ ಸಾರಿಗೆ ವಾಹನಗಳನ್ನು ಬಳಸಿಕೊಂಡು ಪರೀಕ್ಷೆಗಳಿಗೆ ಹಾಜರಾಗುವುದು. ಖಾಸಗಿ ಸಾರಿಗೆ ವಾಹನಗಳ ಲಭ್ಯವಿಲ್ಲದ ಸ್ಥಳಗಳಲ್ಲಿ ವಿದ್ಯಾರ್ಥಿಗಳ ಪಾಲಕರು, ಗ್ರಾಮೀಣ ವಿದ್ಯಾರ್ಥಿಗಳಿಗೆ ಸಂಬಂಧಿಸಿದ ಆಯಾ ಗ್ರಾಮದ ಇತರೆ ಸಾರ್ವಜನಿಕರು, ಹಿತೈಷಿಗಳು ತಾವು ಹೊಂದಿರುವ ಹಾಗೂ ತಮಗೆ ಅನುಕೂಲಕರವಾದಂತಹ ವಾಹನಗಳಿಂದ ಪರೀಕ್ಷಾರ್ಥಿಗಳನ್ನು ಸಂಬಂದಪಟ್ಟ ಪರೀಕ್ಷಾ ಕೇಂದ್ರಗಳಿಗೆ ನಿಗಧಿತ ವೇಳೆಗೆ ತಲುಪಿಸಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಿಕೊಡಬೇಕೆಂದು ಈ ಮೂಲಕ ಮನವಿ ಮಾಡಿಕೊಳ್ಳುತ್ತೇವೆ.

ಕುಲಸಚಿವರು
ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,
ಸಂಪಾದಕರು / ವರದಿಗಾರರು